All India Radio: Bangalore
Regional Bulletin In Kannada
08.06.2025 / 2.30 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

- ಬೆಂಗಳೂರಿನಲ್ಲಿ ರೈತರೊಂದಿಗೆ ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಸಂವಾದ
- ಮೈಸೂರಿನ ರೈಲ್ವೇ ನಿಲ್ದಾಣದಲ್ಲಿ ಹೆಚ್ಚುವರಿಯಾಗಿ ೫ ಫ್ಲಾಟ್‌ಫಾರ್ಮ್ ಗಳ ನಿರ್ಮಾಣ
- ವಿಶ್ವದ ಅತೀ ಎತ್ತರದ ಚೆನಾಬ್ ರೈಲ್ವೆ ಸೇತುವೆ ನಿರ್ಮಾಣದಲ್ಲಿ ಬೆಂಗಳೂರಿನ ಜಿ.ಮಾಧವಿ ಲತಾ ಪ್ರಮುಖ ಪಾತ್ರ
- ಮಂಗಳೂರಿನ ಕದ್ರಿಯಲ್ಲಿ ಪುರಾತನ ಬುದ್ಧನ ಶಿಲ್ಪ ಪತ್ತೆ

****************************

ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಇಂದು ಬೆಂಗಳೂರಿಗೆ ಆಗಮಿಸಿದ್ದಾರೆ. ಬೆಂಗಳೂರಿನ ಭಾರತೀಯ ಕೃಷಿ ಸಂಶೋಧನಾ ಮಂಡಳಿ ಮತ್ತು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವಾಲಯ ಸಹಯೋಗದಲ್ಲಿ ಹೆಸರಘಟ್ಟದಲ್ಲಿರುವ ಭಾರತೀಯ ತೋಟಗಾರಿಕೆ ಸಂಶೋಧನಾ ಸಂಸ್ಥೆಯ ಆವರಣದಲ್ಲಿ ಆಯೋಜಿಸಿರುವ 'ವಿಕಸಿತ ಕೃಷಿ ಸಂಕಲ್ಪ ಅಭಿಯಾನ' ಕಾರ್ಯಕ್ರಮದಲ್ಲಿ ಸಚಿವರು ಭಾಗವಹಿಸಿದ್ದಾರೆ. ಈ ವೇಳೆ ಟೊಮಾಟೊ, ಆವಕಾಡೊ ಹಣ್ಣು ಸೇರಿದಂತೆ ಇತರೆ ಬೆಳೆ ಬೆಳೆದ ರೈತರೊಂದಿಗೆ ಸಚಿವರು ಸಂವಾದ ನಡೆಸಿದರು. ರೈತರು ಅನುಭವಿಸುತ್ತಿರುವ ಸಮಸ್ಯೆಗಳ ಕುರಿತು ನೇರವಾಗಿ ಅವರಿಂದಲೇ ಮಾಹಿತಿ ಪಡೆದರು. ಬಳಿಕ ಕೃಷಿ ವಿದ್ಯಾರ್ಥಿಗಳೊಂದಿಗೂ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಸಂವಾದ ನಡೆಸಿದರು.

****************************

ಬೆಂಗಳೂರಿನ ಸ್ಥಳೀಯ ರೈತರಾದ ಅರುಣ್ ಕುಮಾರ್, ಡ್ರ್ಯಾಗನ್ ಫ್ರೂಟ್ ಬೆಳೆದು, ಸುತ್ತಮುತ್ತಲಿನ ರೈತರ ಗಮನ ಸೆಳೆದಿದ್ದಾರೆ. ಅರುಣ್ ಕುಮಾರ್ ಅವರು ಸಾಫ್ಟ್‌ವೇರ್ ಉದ್ಯೋಗ ತೊರೆದು, ಪತ್ನಿ ಸಮೇತ ಕೃಷಿ ಕ್ಷೇತ್ರದಲ್ಲಿ ತೊಡಗಿಸಿಕೊಂಡು, ಮೊದಲ ಬಾರಿಗೆ

ಪ್ರಯೋಗಶೀಲ ಕೃಷಿ ಮಾಡುತ್ತಿದ್ದಾರೆ. ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಡ್ರ್ಯಾಗನ್ ಫ್ರೂಟ್‌ಗೆ ಬಹು ಬೇಡಿಕೆ ಇರುವ ಹಿನ್ನೆಲೆಯಲ್ಲಿ ಈ ಬೆಳೆ ಬೆಳೆಯಲು ಮುಂದಾಗಿದ್ದಾರೆ. ಈ ಕುರಿತು ಆಕಾಶವಾಣಿಯೊಂದಿಗೆ ರೈತ ಅರುಣ್ ಕುಮಾರ್ ಮಾಹಿತಿ ಹಂಚಿಕೊಂಡಿದ್ದಾರೆ.

ಧ್ವನಿ: ರೈತ ಅರುಣ್ ಕುಮಾರ್

****************************

ಮೈಸೂರು-ರೈಲ್ವೆ ಕಾಮಗಾರಿಯಲ್ಲಿ ಗುಣಮಟ್ಟಕ್ಕೆ ಆದ್ಯತೆ ನೀಡುವಂತೆ ಅಧಿಕಾರಿಗಳಿಗೆ ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಸೂಚಿಸಿದ್ದಾರೆ.ಮೈಸೂರಿನ ರೈಲ್ವೆ ಡಿಆರ್‌ಎಂ ಕಚೇರಿಯಲ್ಲಿ ಮೈಸೂರು ವಿಭಾಗೀಯ ರೈಲ್ವೆ ಪ್ರಬಂಧಕರು ಹಾಗೂ ಇತರೆ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಮೈಸೂರಿನ ವಿಭಾಗೀಯ ಮಟ್ಟದಲ್ಲಿ ನಡೆಯುತ್ತಿರುವ ವಿವಿಧ ಕಾಮಗಾರಿಗಳ ಬಗ್ಗೆ ಮಾಹಿತಿ ಪಡೆದರು. ಮೈಸೂರಿನ ರೈಲ್ವೆ ನಿಲ್ದಾಣದಲ್ಲಿ ೪೩೯ಕೋಟಿ ೩೦ಲಕ್ಷ ರೂಪಾಯಿ ವೆಚ್ಚದಲ್ಲಿ ಹೆಚ್ಚುವರಿಯಾಗಿ ೫ ಪ್ಲಾಟ್‌ಫಾರಂಗಳನ್ನು ನಿರ್ಮಾಣ ಮಾಡಲಾಗುತ್ತಿದೆ. ಇದಕ್ಕಾಗಿ ಸಬ್ ವೇ, ಸ್ಕೈವಾಕ್ ಸೇರಿದಂತೆ ವಿವಿಧ ಸೌಲಭ್ಯಗಳನ್ನು ಮಾಡಿಕೊಡಲಾಗುತ್ತದೆ. ಅಲ್ಲದೇ ಸಿಬ್ಬಂದಿಗಳಿಗಾಗಿ ವಸತಿ ನಿರ್ಮಾಣ ಮಾಡಲಾಗುತ್ತಿದ್ದು, ಅದರ ಕಾಮಗಾರಿ ಪ್ರಗತಿಯಲ್ಲಿದೆ ಎಂದು ಡಿಆರ್‌ಎಂ ಮುದಿತ್ ಮಿಥಲ್ ಮಾಹಿತಿ ನೀಡಿದರು. ನಂತರ ಸುದ್ದಿಗಾರರೊಂದಿಗೆ ವಿ.ಸೋಮಣ್ಣ ಮಾತನಾಡಿ, ರೈಲ್ವೆ ಇಲಾಖೆ ವತಿಯಿಂದ ರಾಜ್ಯದಲ್ಲಿ ೩೯ ಸಾವಿರ ಕೋಟಿ ರೂಪಾಯಿ ವೆಚ್ಚದ ೧೩ ಯೋಜನೆಗಳು ಪ್ರಗತಿಯಲ್ಲಿವೆ. ಪ್ರಮುಖವಾಗಿ ರಾಯದುರ್ಗ-ತುಮಕೂರು, ದಾವಣಗೆರೆ-ತುಮಕೂರು, ಕುಡುಚಿ-ಗದಗ ಸೇರಿದಂತೆ ಅನೇಕ ಯೋಜನೆಗಳ ಕಾಮಗಾರಿಗಳು ನಡೆಯುತ್ತಿವೆ. ೨೫ ವರ್ಷಗಳಿಂದ ಬಾಕಿ ಉಳಿದಿರುವ ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗಿದೆ ಎಂದು ಹೇಳಿದರು.

****************************

ಜಮ್ಮು-ಕಾಶ್ಮೀರದಲ್ಲಿ ಇತ್ತೀಚೆಗೆ ಪ್ರಧಾನಿ ನರೇಂದ್ರ ಮೋದಿ ಅವರು ಲೋಕಾರ್ಪಣೆಗೊಳಿಸಿದ ವಿಶ್ವದ ಅತೀ ಎತ್ತರದ ಚೆನಾಬ್ ರೈಲ್ವೆ ಸೇತುವೆಯ ನಿರ್ಮಾಣಕ್ಕಾಗಿ ೧೭ ವರ್ಷಗಳ ಕಾಲ

ಬೆಂಗಳೂರು ಮೂಲದ ಎಂಜಿನಿಯರ್ ಜಿ.ಮಾಧವಿ ಲತಾ ಶ್ರಮಿಸಿದ್ದಾರೆ. ಸೇತುವೆಯು ನೂರಾರು ವರ್ಷ ಸ್ಥಿರವಾಗಿ ನಿಲ್ಲಲು, ಕಣಿವೆಯ ಇಳಿಜಾರಿನಲ್ಲಿ ಸೇತುವೆಯ ದೃಢ ಅಡಿಪಾಯ ನಿರ್ಮಿಸುವಲ್ಲಿ ಬೆಂಗಳೂರಿನ ಐಐಎಸ್‌ಸಿ ಯ ಸಿವಿಲ್ ಎಂಜಿನಿಯರಿಂಗ್ ವಿಭಾಗದ ಪ್ರಾಧ್ಯಾಪಕಿ ಹಾಗೂ ರಾಕ್ ಎಂಜಿನಿಯರಿಂಗ್ ತಜ್ಞೆ ಮಾಧವಿ ಅವರು ಸಲಹೆ-ಸೂಚನೆಗಳನ್ನು ನೀಡಿದ್ದಾರೆ. ಪ್ರದೇಶದಲ್ಲಿನ ಶಿಲೆಗಳ ಅಧ್ಯಯನ ನಡೆಸಿದ್ದ ಮಾಧವಿ ಮತ್ತು ತಂಡಕ್ಕೆ ಇಳಿಜಾರಿನಲ್ಲಿ ಸೇತುವೆ ನಿರ್ಮಾಣ ಮಾಡಬೇಕಿದ್ದ ದೊಡ್ಡ ಸವಾಲು ಎದುರಾಗಿತ್ತು. ಆದಾಗ್ಯೂ ಶಿಲೆಗಳು, ಉಕ್ಕಿನ ಸರಳುಗಳೊಂದಿಗೆ ನಿಖರವಾಗಿ ಕಾಂಕ್ರೀಟ್ ಗ್ರೌಟಿಂಗ್ ಮಾಡುವ ಮೂಲಕ ಸವಾಲನ್ನು ಈ ತಂಡ ಎದುರಿಸಿತ್ತು.

****************************

ಡಾ.ಬಾಬಾಸಾಹೇಬ ಅಂಬೇಡ್ಕರ್ ಅವರ ಹಾದಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಮಹಿಳೆಯರ ಸಬಲೀಕರಣಕ್ಕೆ ಶ್ರಮಿಸುತ್ತಿದ್ದಾರೆ. ನಾರಿಶಕ್ತಿ ವಂಧನಾ ಅಧಿನಿಯಮ ಮಂಡಿಸಿ ಜಾರಿಗೆ ಪ್ರಯತ್ನಿಸಿದ್ದು, ಮಹಿಳೆಯರ ಬಗ್ಗೆ ಅವರಿಗೆ ಇರುವ ಕಳಕಳಿ ತೋರುತ್ತದೆ ಎಂದು ಕೊಪ್ಪಳದ ನ್ಯಾಷನಲ್ ಪ್ಯಾರಾಮೆಡಿಕಲ್ ಕಾಲೇಜಿನ ಆಡಳಿತ ಅಧಿಕಾರಿ ಗೀತಾ ಬಳ್ಳಾರಿ ಹೇಳಿದ್ದಾರೆ.

ಧ್ವನಿ: ಗೀತಾ ಬಳ್ಳಾರಿ, ನ್ಯಾಷನಲ್ ಪ್ಯಾರಾಮೆಡಿಕಲ್ ಕಾಲೇಜಿನ ಆಡಳಿತ ಅಧಿಕಾರಿ

****************************

ಮಂಗಳೂರಿನ ಕದ್ರಿ ಮಂಜುನಾಥ ದೇವಾಲಯದ ಕೆರೆಯೊಂದರಲ್ಲಿ ಪುರಾತನವಾದ ಅಪೂರ್ವ ಬುದ್ಧನ ಶಿಲ್ಪ ಮತ್ತು ಗುಹಾ ಸಮುಚ್ಚಯಗಳು ಪತ್ತೆಯಾಗಿದೆ. ಈ ಕುರಿತು ಮಾಹಿತಿ ನೀಡಿದ ಶಿರ್ವದ ಮುಲ್ಕಿ ಸುಂದರ್ ರಾಮ್ ಶೆಟ್ಟಿ ಕಾಲೇಜಿನ ಪ್ರಾಚೀನ ಇತಿಹಾಸ ಮತ್ತು ಪುರಾತತ್ತ್ವ ಶಾಸ್ತ್ರ ವಿಭಾಗದ ನಿವೃತ್ತ ಸಹ ಪ್ರಾಧ್ಯಾಪಕ ಪ್ರೋಫೆಸರ್ ಟಿ.ಮುರುಗೇಶಿ, ಇತ್ತೀಚೆಗೆ ನಡೆಸಿದ ಪುರಾತತ್ತ್ವ ಇಲಾಖೆಯ ಉತ್ಖನನದ ಸಂದರ್ಭದಲ್ಲಿ ಇದು ಪತ್ತೆಯಾಗಿದೆ ಎಂದು ತಿಳಿಸಿದ್ದಾರೆ. ಕೆರೆಯ ನೀರಿನಲ್ಲಿ ವಿಸರ್ಜನೆ ಮಾಡಿರುವ ಸ್ಥಿತಿಯಲ್ಲಿ ಕಂಡುಬಂದ ಈ ಶಿಲ್ಪವನ್ನು ಕದ್ರಿ ದೇವಾಲಯದ ಆಡಳಿತಾಧಿಕಾರಿಗಳ ಅನುಮತಿಯೊಂದಿಗೆ ಮೇಲಕ್ಕೆ

ತೆಗೆದು, ಅಧ್ಯಯನ ಮಾಡಲಾಗಿದೆ. ಈ ಶಿಲ್ಪವು ಪದ್ಮಪೀಠದ ಮೇಲೆ ಪದ್ಮಾಸನದಲ್ಲಿ ಧ್ಯಾನಮುದ್ರೆಯಲ್ಲಿ ಕುಳಿತ ಭಂಗಿಯಲ್ಲಿ ಇದೆ. ಶಿಲ್ಪದ ಬಲಗೈ ಸಂಪೂರ್ಣ ತುಂಡಾಗಿದೆ. ಎಡಗೈನ ಹಸ್ತ ಮಡಚಿದ ಕಾಲುಗಳ ಮಧ್ಯೆ ಇರಿಸಲ್ಪಟ್ಟಿದೆ. ಎಡಭುಜದ ಮೇಲಿಂದ ಉತ್ತರೀ ಹಾದುಬಂದಿದೆ ಎಂದು ಅವರು ವಿವರಿಸಿದರು. ಶಿಲ್ಪವು ೬೮ ಸೆಂಟಿ ಮೀಟರ್ ಎತ್ತರವಾಗಿದ್ದು, ೪೮ ಸೆ.ಮೀ ಅಗಲವಾಗಿದೆ. ಈ ಶಿಲ್ಪವು ಬಹುತೇಕ ಗೋವಾದ ಮುಶಿರಾ ವಾಡೋದಲ್ಲಿ ದೊರೆತ ಶಿಲ್ಪವನ್ನು ಹೋಲುತ್ತದೆ. ಆದ್ದರಿಂದ ಶಿಲ್ಪದ ಕಾಲಮಾನವನ್ನು ಕ್ರಿಸ್ತ ಶಕ ೪ರಿಂದ ೬ನೇ ಶತಮಾನದ ಶಿಲ್ಪವೆಂದು ಪರಿಗಣಿಸಬಹುದಾಗಿದೆ ಎಂದು ಪ್ರೋಫೆಸರ್ ಟಿ.ಮುರುಗೇಶಿ ಮಾಹಿತಿ ನೀಡಿದ್ದಾರೆ.

****************************

ಕಳೆದ ಒಂದು ದಶಕದಲ್ಲಿ ಭಾರತ ಸರ್ವತೋಮುಖವಾಗಿ ಗಮನಾರ್ಹ ಬದಲಾವಣೆಯನ್ನು ಕಂಡಿದ್ದು, ಸೇವೆ, ಸುಶಾಸನ ಮತ್ತು ಬಡವರ ಕಲ್ಯಾಣದ ತತ್ವದಡಿ ಮುನ್ನಡೆಯುತ್ತಿದೆ. ಕೇಂದ್ರ ಸರ್ಕಾರ ಕಳೆದ ೧೧ ವರ್ಷಗಳಲ್ಲಿ ಕೈಗೊಂಡಿರುವ ಹಲವು ಪ್ರಮುಖ ಪ್ರಯತ್ನಗಳ ಕುರಿತು ಆಕಾಶವಾಣಿ ಸುದ್ದಿ ವಿಭಾಗ ವಿಶೇಷ ವರದಿಯನ್ನು ಪ್ರಸಾರ ಮಾಡುತ್ತಿದೆ. ಇಂದು, ಜೀವನದಲ್ಲಿ ಸುಧಾರಣೆಗಳು ಮತ್ತು ಉಪಕ್ರಮಗಳು ಪ್ರತಿಯೊಬ್ಬ ನಾಗರಿಕನ ದೈನಂದಿನ ಜೀವನವನ್ನು ಹೇಗೆ ಸರಳ, ಹೆಚ್ಚು ಸುರಕ್ಷಿತ ಮತ್ತು ಘನತೆಯಿಂದ ಕೂಡಿದೆ ಎಂಬುದರ ಕುರಿತ ವರದಿ ಮೂಡಿಬರಲಿದೆ.

ಧ್ವನಿ: ವಿಶೇಷ ವರದಿ

****************************